## 15. ಕೋರ್ಟ್‌ಗಳಿಗೆ ಮಾರ್ಗಸೂಚಿ

ಲಾಕ್‌ಡೌನ್ ಸಡಿಲಿಕೆಯಿಂದಾಗಿ ಜೂನ್ 1ರಿಂದ ಕೋರ್ಟ್‌ಗಳ ದೈನಂದಿನ ಕಲಾಪ ಆರಂಭಗೊಳ್ಳುವ ಹಿನ್ನೆಲೆಯಲ್ಲಿ ಜಿಲ್ಲಾ ನ್ಯಾಯಾಲಯಗಳಿಗೆ 38 ಅಂಶಗಳ ಮಾರ್ಗಸೂಚಿ ಪ್ರಕಟಿಸಲಾಗಿದೆ. ಹೈಕೋರ್ಟ್ ರಿಜಿಸ್ಟ್ರಾರ್ ಜನರಲ್ ರಾಜೇಂದ್ರ ಬದಾಮಿಕರ್ ಮಾರ್ಗಸೂಚಿ ಪ್ರಕಟಿಸಿದ್ದು, ರಾಜ್ಯದ ಎಲ್ಲ ಜಿಲ್ಲಾ ನ್ಯಾಯಾಲಯಗಳಿಗೂ ಸುತ್ತೋಲೆ ಕಳುಹಿಸಲಾಗಿದೆ. ಪ್ರತಿ ಕೋರ್ಟ್ ಹಾಲ್‌ಗಳಲ್ಲಿ 20ಕ್ಕಿಂತ ಹೆಚ್ಚು ವಕೀಲರು, ಸಿಬ್ಬಂದಿ ಇರುವಂತಿಲ್ಲ. ಒಂದು ವೇಳೆ ಇದ್ದರೆ ಕೋರ್ಟ್ ಕಲಾಪ ಸ್ಥಗಿತಗೊಳಿಸಬೇಕಾಗುತ್ತದೆ. ಮೊದಲೆರಡು ವಾರ ಸಾಕ್ಷ್ಯ ವಿಚಾರಣೆಗೆ ಅವಕಾಶವಿಲ್ಲ. ಕೇವಲ ವಕೀಲರ ವಾದ ಮಂಡನೆಗಷ್ಟೇ ಅವಕಾಶ ನೀಡಲಾಗುವುದು ಎಂದು ಸುತ್ತೋಲೆಯಲ್ಲಿ ತಿಳಿಸಲಾಗಿದೆ.

ಕೆಮ್ಮು, ನೆಗಡಿ, ಜ್ವರ ಇದ್ದವರಿಗೆ ಕೋರ್ಟ್‌ಗೆ ಪ್ರವೇಶವಿಲ್ಲ. ಕಕ್ಷಿದಾರರ ಪ್ರವೇಶಕ್ಕೆ ನಿರ್ಬಂಧವಿರಲಿದ್ದು, ಕೋರ್ಟ್‌ಗಳಿಗೆ ಬರುವ ವಕೀಲರು ತಾವು ಹೊರದೇಶ, ಹೊರ ರಾಜ್ಯ ಹಾಗೂ ನಿರ್ಬಂಧಿತ ವಲಯಕ್ಕೆ ಭೇಟಿ ನೀಡಿಲ್ಲವೆಂದು ಪ್ರಮಾಣಪತ್ರ ಸಲ್ಲಿಸುವುದು ಕಡ್ಡಾಯ. ವಕೀಲರು, ನ್ಯಾಯಾಧೀಶರು ಮಾಸ್ಕ್ ಧರಿಸಬೇಕು. ವಕೀಲರು, ಸಿಬ್ಬಂದಿ 1 ಮೀಟರ್ ಅಂತರ ಕಾಯ್ದುಕೊಳ್ಳಬೇಕು. ಬೆಳಗ್ಗೆ 10 ಹಾಗೂ ಮಧ್ಯಾಹ್ನ 10 ಪ್ರಕರಣಗಳನ್ನು ಮಾತ್ರ ವಿಚಾರಣೆ ನಡೆಸಬೇಕು ಎಂದು ತಿಳಿಸಿರುತ್ತಾರೆ.

ಆಧಾರ:ವಿಜಯವಾಣಿ, ದಿನಾಂಕ:27.05.2020